# ಕರ್ನಾಟಕ ವಿಧಾನ ಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

## ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 12-03-2021 ಪ್ರಶ್ನೆ ಸಂಖ್ಯೆ : 920 (1128)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ )

ಉತ್ತರ ನೀಡಬೇಕಾದ ದಿನಾಂಕ : 12-03-2021

ಉತ್ತರಿಸುವ ಸಚಿವರು : ಮೂಲಸೌಲಭ್ಯ ಅಭಿವೃದ್ಧಿ ಹಾಗೂ ಹಜ್ ಮತ್ತು ವಕ್ಫ್ ಸಚಿವರು

ವಿಷಯ : ನೆನೆಗುದಿಗೆ ಬಿದ್ದಿರುವ ರೈಲ್ವೆ ಮಾರ್ಗಗಳ ಮೇಲು ಸೇತುವೆ ಮತ್ತು ಕೆಳರಸ್ತೆ ನಿರ್ಮಾಣ ಕಾಮಗಾರಿಗಳ ಬಗ್ಗೆ

(ಅ) ತುಮಕೂರು ನಗರ ಸೇರಿದಂತೆ ರಾಜ್ಯದ ಎಲ್ಲಾ ನಗರ ಮತ್ತು ಇತರೆ ಕಡೆಗೆ ಹಾದು ಹೋಗುವ ರೈಲ್ವೆ ಮಾರ್ಗಗಳ ಮೇಲ್ಸೇತುವೆ ಮತ್ತು ಕೆಳರಸ್ತೆ ನಿರ್ಮಾಣಕ್ಕೆ ಕೇಂದ್ರ ಸರ್ಕಾರ ಕೈಗೊಂಡಿರುವ ಯೋಜನೆಗಳಿಗೆ ಪೂರಕವಾಗಿ ರಾಜ್ಯ ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ;

(ಆ) ಈ ಕಾಮಗಾರಿಗಳ ಪೈಕಿ ಹಲವಾರು ಕಾಮಗಾರಿಗಳು, ಜಮೀನು ಭೂಸ್ವಾಧೀನ, ಮೂಲ ಸೌಕರ್ಯ ಒದಗಿಸುವ, ಪೈಪ್‌ಗಳ, ಕಂಬಗಳ ಸ್ಥಳಾಂತರ ಮತ್ತು ರಾಜ್ಯ-ಕೇಂದ್ರ ಸರ್ಕಾರಗಳ ಇಲಾಖೆ ಮತ್ತು ಸಂಸ್ಥೆಗಳಿಂದ ಪಡೆಯಬೇಕಾಗಿರುವ ನಿರಾಕ್ಷೇಪಣಾ ಪತ್ರಗಳ ಕೊರತೆಯಿಂದ ಮತ್ತು ರಾಜ್ಯ ಸರ್ಕಾರ ಭೂಸ್ವಾಧೀನ ವೆಚ್ಚವನ್ನು ಭರಿಸಲು ವಿಫಲವಾಗಿರುವುದರಿಂದ ನೆನೆಗುದಿಗೆ ಬಿದ್ದಿರುವುದು ನಿಜವೇ? (ಸಂಪೂರ್ಣ ಮಾಹಿತಿ ನೀಡುವುದು)

(ಇ) ಈ ಕಾಮಗಾರಿಗಳ ಪೈಕಿ ಯಾವ ಯಾವ ಕಾಮಗಾರಿಗಳು ಅರ್ಧಕ್ಕೆ ನಿಂತಿವೆ ; ಯಾವ ಯಾವ ಕಾಮಗಾರಿಗಳು ಪ್ರಗತಿಯಲ್ಲಿವೆ? (ಸಮಗ್ರ ಮಾಹಿತಿ ಒದಗಿಸುವುದು)